## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ಹಿರಿಯೂರು.

## ಸಿ.ಸಿ ಸಂಖ್ಯೆ: 1161/2024

| | | | |
|---|---|---|---|
| ಸಾಕ್ಷಿದಾರರ ಹೆಸರು | - | ನಾಗರಾಜ | ಸಿಡಬ್ಲ್ಯೂ-2 |
| ತಂದೆಯ/ಗಂಡನ ಹೆಸರು | - | ಹನುಮಂತಪ್ಪ | ಪಿಡಬ್ಲ್ಯೂ-2 |
| ವಯಸ್ಸು | - | 50 ವರ್ಷ | ಪ್ರ.ವ.ಬೋ ದಿನಾಂಕ:06.03.2025 |
| ಉದ್ಯೋಗ | - | ವ್ಯವಸಾಯ | |
| ವಾಸ | - | ಬ್ಯಾಡರಹಳ್ಳಿ ಗ್ರಾಮ | |

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿ ಯವರಿಂದ:-**

ಸಾಕ್ಷಿಯು ನಿಪಿ-2 ಮತ್ತು 3 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-**2(ಬಿ) ಮತ್ತು 3(ಬಿ)** ಎಂದು ಗುರುತಿಸಲಾಯಿತು. ನಿಪಿ-4 ಛಾಯಾಚಿತ್ರದಲ್ಲಿ ನಾನು ಹಾಜರಿದ್ದೇನೆ. ನಿಪಿ-2 ಮತ್ತು 3 ಕ್ಕೆ ಸುಮಾರು 10 ತಿಂಗಳ ಹಿಂದೆ ಬ್ಯಾಡರಹಳ್ಳಿ ಬಸ್ ನಿಲ್ದಾಣದ ಬಳಿ ಸಹಿ ಮಾಡಿರುತ್ತೇನೆ. ನಿಪಿ-2 ಮತ್ತು 3 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ಆರೋಪಿಯನ್ನು ನಾನು ನೋಡಿರುವುದಿಲ್ಲ. ಈ ಕುರಿತು ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿರುವುದಿಲ್ಲ ಹಾಗೂ ಯಾವುದೇ ಮುದ್ದೆ ಮಾಲುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲಿನಲ್ಲಿ ಕೇಳುವ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಲಾಯಿತು).

**ಪಾಟೀ-ಸವಾಲು: ಮಾನ್ಯ ಎಪಿಪಿ ಯವರಿಂದ:-**

ದಿನಾಂಕ:22.03.2024 ರಂದು ಸಂಜೆ 5.15 ರ ಸಮಯದಲ್ಲಿ ನಾನು ಮತ್ತು ಚಾಸಾ-3 ರವರು ನಮ್ಮ ಊರಿನ ಬಸ್ ನಿಲ್ದಾಣದಲ್ಲಿ ಇರುವಾಗ ಚಾಸಾ-1 ರವರು ತಮಗೆ ಬಂದ ಭಾತ್ಮಿ ತಿಳಿಸಿ ಧಾಳಿಗೆ ಸಹಕರಿಸಲು ಕೋರಿಕೊಂಡು ನಮಗೆ ನೋಟೀಸ್ ನೀಡಿದರು ಎಂದರೆ ಸರಿಯಲ್ಲ.

ನಂತರ ನಾವು ಮತ್ತು ಪೋಲಿಸರು ಭಾತ್ಮಿ ಬಂದ ಸ್ಥಳಕ್ಕೆ ಹೋಗಿ ನೋಡಲಾಗಿ ಮಮತ ಗಂಡ ಮನೋಹರ ಅವರ ಮನೆಯ ಮುಂದೆ ಮರೆಯಾಗಿ ನಿಂತುಕೊಂಡು ನೋಡಿದಾಗ ಅಲ್ಲಿ ಒಂದು ಬಳಿ ಚೀಲದಲ್ಲಿ ಮದ್ಯ ಮಾರಾಟ ಮಾಡುತ್ತಿರುವುದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ. ನಂತರ ಪೋಲಿಸರು ದಾಳಿ ಮಾಡಲು ಹೋದಾಗ ಅಲ್ಲಿದ್ದ ಸಾರ್ವಜನಿಕರು ಹಾಗೂ ಆರೋಪಿ ಓಡಿಹೋಗಿರುತ್ತಾರೆ ಎಂದರೆ ಸರಿಯಲ್ಲ. ಓಡಿಹೋದ ಆರೋಪಿಯ ಹೆಸರು ವಿಳಾಸ ಕೇಳಲಾಗಿ ಮಮತ ಗಂಡ ಮನೋಹರ, ಬ್ಯಾಡರಹಳ್ಳಿ ಗ್ರಾಮ ಎಂದು ತಿಳಿಯಿತು ಎಂದರೆ ಸರಿಯಲ್ಲ. ಸದರಿ ಮಮತ ಈಗ ನ್ಯಾಯಾಲಯದ ಮುಂದಿರುವ ಆರೋಪಿಯಾಗಿರುತ್ತಾರೆ ಎಂದರೆ ಸರಿಯಲ್ಲ.

ನಂತರ ಮಮತ ಅವರ ಮನೆಯ ಮುಂದೆ ಬಿಟ್ಟು ಹೋಗಿದ್ದ ಒಂದು ಪಾಸ್ಟಿಕ್ ಚೀಲವನ್ನು ನಮ್ಮ ಸಮಕ್ಷಮ ಪರಿಶೀಲಿಸಿದಾಗ ಅದರಲ್ಲಿ 90 ಎಂ.ಎಲ್ ನ ಮದ್ಯ ತುಂಬಿದ 23 ರಾಜಾ ವಿಸ್ಕಿ ಟೆಟ್ರಾ ಪ್ಯಾಕೆಟ್‌ಗಳು ಇದ್ದವು., 90 ಎಂ.ಎಲ್ ನ ಮದ್ಯ ತುಂಬಿದ 5 high wards ಟೆಟ್ರಾ ಪ್ಯಾಕೆಟ್‌ಗಳು ಇದ್ದವು ಹಾಗೂ 330 ಎಂ ಎಲ್ 6 ಕಿಂಗ್ ಫಿಶರ್ ಮದ್ಯ ತುಂಬಿದ ಬಿಯರ್ ಬಾಟಲ್ ಗಳು ಕಂಡು ಬಂದಿರುತ್ತವೆ. ಎಂದರೆ ಸರಿಯಲ್ಲ. ಸ್ಥಳದಲ್ಲಿ ಮದ್ಯ ಮಾರಾಟ ಮಾಡಲು ಯಾವುದೇ ಪರವಾನಿಗೆ ಇಲ್ಲದ ಕಾರಣಕ್ಕಾಗಿ ಚಾಸಾ-1 ರವರು ಅವುಗಳನ್ನು ನಮ್ಮ ಸಮಕ್ಷಮ ಪಂಚನಾಮೆ ತಯಾರಿಸಿ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮದ್ಯವನ್ನು ಒಂದು ಬಿಳಿ ಚೀಲದಲ್ಲಿ ಹಾಕಿ ಸಿ ಎನ್ ಎಂಬ ಅಕ್ಷರದಿಂದ ಪ್ಯಾಕ್ ಮಾಡಿ ಅರಗು ಸೀಲು ಹಾಕಿರುತ್ತಾರೆ ಎಂದರೆ ಸರಿಯಲ್ಲ. ಅದರ ಮೇಲೆ ನಾವು ಸಹಿ ಮಾಡಿದ ಚೀಟಿಯನ್ನು ಅಂಟಿಸಿರತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆಯನ್ನು ಸಂಜೆ

5.40 ರಿಂದ 6.30 ಗಂಟೆವರೆಗೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಈ ಮೇಲೆ ಹೇಳಿದಂತೆ ದಿಃ22.03.2024 ರಂದು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆ ಭಾಗವನ್ನು **ನಿಪಿ–7** ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ–ಸವಾಲುಃ ಆರೋಪಿ ಪರ ಶ್ರೀ.ಡಿ ಜಿ ವಕೀಲರಿಂದಃ–**

ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ಹಿರಿಯೂರು.